ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/189/ಸುತ್ತೋಲೆ/2018-19

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು,ದಿನಾಂಕ:19-02-2020

# ಸುತ್ತೋಲೆ

**ವಿಷಯ:** ಮಾರ್ಚ್-2020 ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯನ್ನು ಸುವ್ಯಸ್ಥಿತವಾಗಿ ನಡೆಸಲು ಸಹಕಾರ ನೀಡುವ ಬಗ್ಗೆ.

**ಉಲ್ಲೇಖ:** ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಪಪೂಶಿಇ/ ಪರೀಕ್ಷೆ/ ಮಾ.ದ್ವಿ.ಪಿ.ಪ/2019-20, ದಿನಾಂಕ:14-02-2020.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಮಾರ್ಚ್ 2020ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯನ್ನು ದಿನಾಂಕ:04-03-2020 ರಿಂದ 23-03-2020 ರವರೆಗೆ ನಡೆಸಲಾಗುವುದು, ಪದವಿ ತರಗತಿಗಳು ಬೋಧಿಸಲಾಗುತ್ತಿರುವ ಕೆಲವು ಪ್ರಥಮ ದರ್ಜೆ ಕಾಲೇಜುಗಳನ್ನೂ ಸಹ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಪರೀಕ್ಷಾ ಕೇಂದ್ರಗಳನ್ನಾಗಿ ಬಳಸಿಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಸದರಿ ಕಾಲೇಜುಗಳ ಕಟ್ಟಡ/ ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ನೀಡುವಂತೆ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರು /ಅಧಿಕಾರಿಗಳು ಸಹಕರಿಸುವಂತೆ ಆದೇಶಿಸುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ದಿನಾಂಕ:04-03-2020 ರಿಂದ 23-03-2020ರವರೆಗೆ ನಡೆಸಲಾಗುವ ಪದವಿ ಪೂರ್ವ ಶಿಕ್ಷಣ ಇಲಾಖೆಯು ನಡೆಸುವ ಪಿ.ಯು.ಸಿ ವಾರ್ಷಿಕ ಪರೀಕ್ಷೆಗಳಿಗೆ ಕಾಲೇಜುಗಳ ಕಟ್ಟಡ/ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ನೀಡಿ ಸಿಬ್ಬಂದಿಗಳ ನೆರವಿನೊಂದಿಗೆ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ಸಹಕರಿಸುವಂತೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ-ಇವರಿಗೆ ಅಗತ್ಯ ಕ್ರಮವಹಿಸಲು.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಭವನ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 012.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ.